ಅಸಲು ದಾವಾ ನಂ.251/2022
ಪಿ.ಡಬ್ಲ್ಯು -1

ದಿನಾಂಕಃ 07-02-2025 ರಂದು ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು.

<u>ಮುಖ್ಯ ವಿಚಾರಣೆಃ- ವಾದಿ ಪರ ಶ್ರೀ .ಪಿ ಆರ್ ಎಮ್ ವಕೀಲರಿಂದ .</u>

ನಾನು ನನ್ನ ಮುಖ್ಯ ವಿಚಾರಣೆಯ ಭಾಗಾಂಶವಾಗಿ ಸಾಕ್ಷ್ಯ ಪ್ರಮಾಣ ಪತ್ರ ಸಲ್ಲಿರುತ್ತೇನೆ. ಅದರಲ್ಲಿ ಬರೆದಿರುವ ಸಂಗತಿಗಳು ಸರಿಯಾಗಿರುತ್ತವೆ.

ಸರ್ವೇ ನಂ.285/4 ಇದರ ಪಹಣಿ ಪತ್ರಿಕೆಯನ್ನು ಹಾಜರುಪಡಿಸಿರುತ್ತೇನೆ ಅದನ್ನು ನಿಪಿ-1 ಎಂದು, ಎಮ್ ಆರ್ ನಂ.150 ರ ಮೂಲ ಪ್ರತಿ ಹಾಜರುಪಡಿಸಿರುತ್ತೇನೆ ಅದನ್ನು ನಿಪಿ-2 ಎಂದು, ಸರ್ವೇ ನಂ.76/3 ರ ಪಹಣಿ ಹಾಜರುಪಡಿಸಿರುತ್ತೇನೆ ಅದನ್ನು ನಿಪಿ-3 ಎಂದು, ಆಸ್ತಿ ನಂ.25 ರ ತೆರಿಗೆ ಬೇಡಿಕೆ ಪ್ರತಿ ಹಾಜರುಪಡಿಸಿರುತ್ತೇನೆ ಅದನ್ನು ನಿಪಿ-4 ಎಂದು, ಕುಟುಂಬ ಉತ್ತರ ಜೀವಿತರ ಪ್ರತಿ ಹಾಜರುಪಡಿಸಿರುತ್ತೇನೆ ಅದನ್ನು ನಿಪಿ-5 ಎಂದು, ವಾದಿ ನನಗೆ ಸಾಕ್ಷ್ಯ ನುಡಿಯಲು ನೀಡಿದ ಒಟ್ಟು ಮೊಕ್ತಿಯಾರ ಪತ್ರದ ಮೂಲ ಪ್ರತಿ ಹಾಜರುಪಡಿಸಿರುತ್ತೇನೆ ಅದನ್ನು ನಿಪಿ-6 ಎಂದು ಗುರುತಿಸಲಾಯಿತು.

ಆದ್ದರಿಂದ ನಾನು ಕೋರಲಾದಂತೆ ದಾವೆಯನ್ನು ಖರ್ಚು ಸಹಿತ ಡಿಕ್ರಿ ಮಾಡಲು ಪ್ರಾರ್ಥಿಸುತ್ತೇನೆ.

**<u>ಪಾಟೀಸವಾಲುಃ-</u>** ಪ್ರತಿವಾದಿ ಪರ ಶ್ರೀ.ಎಮ್ ಎಸ್ ಎಮ್ ವಕೀಲರು ಹಾಜರು ಇರುವುದಿಲ್ಲ ಆದ್ದರಿಂದ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

ಮರುವಿಚಾರಣೆಃ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಸಮಕ್ಷಮ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು).

ಓ.ಹೆ.ಕೆ.ಸರಿ.ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆ ಎಮ್ ಎಫ್ ಸಿ, ಶಿಗ್ಗಾಂವ.
(ಸ್ಥಳಃ ಸವಣೂರ).